ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

7

ಇಲಾಖೆ / ವಿಷಯ : DEPARTMENT / SUBJECT: ಮಳೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 15/10/2020

# ಜೀವ ಕಸಿದ ನೆರೆ

15/10/20

## । ಕಲಬುರಗಿಯಲ್ಲಿ ಶತಮಾನದ ಮಳೆಗೆ ಕಂಗಾಲಾದ ಜನ

## । ಉಕ್ಕಿದ ಭೀಮಾ, ಕಾಗಿಣಾ ನದಿ । ಅಪಾರ ಹಾನಿ, ಆರು ಜನ ಬಲಿ

**ಹುಬ್ಬಳ್ಳಿ:** ಮುಂಗಾರು ಮಳೆ ಮುನಿಸಿಗೆ ಉತ್ತರ ಕರ್ನಾಟಕ ಮತ್ತೆ ಕಂಗಾಲಾಗಿದೆ. ಬಹುತೇಕ ಜಿಲ್ಲೆಗಳಲ್ಲಿ ಸುರಿಯುತ್ತಿರುವ ಭಾರೀ ಮಳೆಗೆ ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ. ಭೀಮಾ, ಕಾಗಿಣಾ, ಮಲಪ್ರಭಾ, ಕೃಷ್ಣಾ ಸೇರಿದಂತೆ ಪ್ರಮುಖ ನದಿಗಳು ಉಕ್ಕಿ ಹರಿಯುತ್ತಿವೆ. ಅಪಾರ ಪ್ರಮಾಣದ ಬೆಳೆ ಹಾನಿಯಾಗಿದ್ದು ಆರು ಜನ ಮೃತಪಟ್ಟಿದ್ದಾರೆ.

ಭೀಮಾ ನದಿ ಪ್ರವಾಹಕ್ಕೆ ಸಿಲುಕಿ ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲೂಕಿನ ನರಬೋಳಿ ಗ್ರಾಮದ ಭಾಗಣ್ಣ ತಿಪ್ಪಣ್ಣ ಹಡಪದ (21) ಕೊಚ್ಚಿ ಹೋಗಿದ್ದಾರೆ. ಕಲಬುರಗಿಯ ಸುಂದರ ನಗರದಲ್ಲಿ ಮನೆ ಬಿದ್ದು ಭೀಮಬಾಯಿ (90) ಸಾವನ್ನಪ್ಪಿದ್ದಾರೆ. ಚಿತ್ರದುರ್ಗ ಜಿಲ್ಲೆ ನಾಯಕನಹಟ್ಟಿ ಸಮೀಪದ ಮನಮೈನಹಟ್ಟಿ ಗ್ರಾಮದಲ್ಲಿ ಮಣ್ಣು ತೆಗೆಯುವಾಗ ದಿಬ್ಬ ಕುಸಿದು ಸತೀಶ್ ನಾಯ್ಕ (34) ಹಾಗೂ ಹರೀಶ್ (24) ಮೃತಪಟ್ಟಿದ್ದಾರೆ. ಗದಗ ಜಿಲ್ಲೆ ರೋಣ ತಾಲೂಕಿನಲ್ಲಿ ಮನೆ ಗೋಡೆ ಕುಸಿದು ಶಂಕ್ರವ್ವ ನಿಂಗನಗೌಡ ಭೀಮನಗೌಡ್ರ(70) ಅಸುನೀಗಿದ್ದಾರೆ. ಮಲಪ್ರಭಾ ನದಿಯಲ್ಲಿ ಕಾಲು ಜಾರಿ ಬಿದ್ದಿದ್ದ ಬಾಗಲಕೋಟೆ ಜಿಲ್ಲೆಯ ಕೊಣ್ಣೂರು ಗ್ರಾಮದ ರೈತ ವೆಂಕನಗೌಡ ಸಾಳಿಗೌಡರ ಮೃತದೇಹ ಕುಳಗೇರಿ ಕ್ರಾಸ್ ಬಳಿ ಬುಧವಾರ ಪತ್ತೆಯಾಗಿದೆ. ಮಲಪ್ರಭಾ ನದಿಯಲ್ಲಿ ಭೀಮಾ ನದಿ ಪ್ರವಾಹದಲ್ಲಿ ಸಿಲುಕಿದ 25ಕ್ಕೂ ಹೆಚ್ಚು ಜನರನ್ನು ಸಂರಕ್ಷಿಸಲಾಗಿದೆ.

**95 ಮಿ.ಮೀ. ದಾಖಲೆ ಮಳೆ:** ಮಂಗಳವಾರ ಸಂಜೆಯಿಂದ ಬುಧವಾರ ಬೆಳಗಿನವರೆಗೆ ಕಲಬುರಗಿಯಲ್ಲಿ ದಾಖಲೆ 95 ಮಿ.ಮೀ. ಮಳೆಯಾಗಿದೆ. ಅತಿವೃಷ್ಟಿಯಿಂದ ಈಗಾಗಲೇ ಅರ್ಧದಷ್ಟು ಬೆಳೆ ಹಾನಿಯಾಗಿತ್ತು.

▶ 5ನೇ ಪುಟಕ್ಕೆ



ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ಮುಡಬೂಳ ಶಾಲೆ ನೀರಿನಲ್ಲಿ ಮುಳುಗಿರುವುದು.

## ಮಲೆನಾಡಲ್ಲೂ ಧಾರಾಕಾರ ಮಳೆ

ವಾಯುಭಾರ ಕುಸಿತದಿಂದ ಮಲೆನಾಡಿನಲ್ಲೂ ಧಾರಾಕಾರ ಮಳೆಯಾಗುತ್ತಿದೆ. ಶಿವಮೊಗ್ಗ, ಚಿಕ್ಕಮಗಳೂರಿನಲ್ಲಿ ಜನಜೀವನ ಅಸ್ತವ್ಯಸ್ತವಾಗಿದೆ. ಹೇಮಾವತಿ, ಭದ್ರಾ, ತುಂಗಾ ನದಿಗಳ ನೀರಿನ ಮಟ್ಟದಲ್ಲಿ ಏರಿಕೆಯಾಗಿದೆ. ಮೂಡಿಗೆರೆ ತಾಲೂಕು ಕೊಟ್ಟಿಗೆಹಾರ, ಚಾರ್ಮಾಡಿ, ಬಣಕಲ್, ಗೋಣಿಬೀಡು, ಕಳಸ, ಹೊರನಾಡು, ಕುದುರೆಮುಖ, ಸಂಸೆ, ಶೃಂಗೇರಿ, ಕೆರೆಕಟ್ಟೆ, ಕಿಗ್ಗಾ ವ್ಯಾಪ್ತಿಯಲ್ಲಿ ಬುಧವಾರ ಅತೀ ಹೆಚ್ಚು ಮಳೆಯಾಗಿದೆ. ಮಳೆ ಮುಂದುವರಿದಲ್ಲಿ ಕಳಸ-ಹೊರನಾಡು ಸಂಪರ್ಕ ಕಲ್ಪಿಸುವ ಹೆಬ್ಬಾಳೆ ಸೇತುವೆ ಮತ್ತೆ ಮುಳುಗಡೆಯಾಗುವ ಸಾಧ್ಯತೆ ಇದೆ. ಚಾರ್ಮಾಡಿ ಘಾಟ ಪ್ರದೇಶದಲ್ಲಿ ಮಂಜುಮುಸುಕಿದ ವಾತಾವರಣ ಇದ್ದು ವಾಹನ ಸವಾರರು ಪರದಾಡುವಂತಾಗಿದೆ. ನಿರಂತರ ಮಳೆಯಿಂದ ತರೀಕೆರೆ ತಾಲೂಕು ಲಕ್ಕವಳ್ಳಿ ಗ್ರಾಮದಲ್ಲಿರುವ ಭದ್ರಾ ಜಲಾಶಯದ ಒಳ ಹರಿವು ಹೆಚ್ಚಿದ್ದು, ಕ್ರಸ್ಟ್‌ಗೇಟ್ ತೆರೆದು 3,300 ಕ್ಯೂಸೆಕ್ ಹಾಗೂ ರಿವರ್‌ಬೆಡ್ ಮೂಲಕ 1,000 ಕ್ಯೂಸೆಕ್ ನೀರು ಸೇರಿ ಒಟ್ಟಾರೆ 4,300 ಕ್ಯೂಸೆಕ್ ನೀರು ಹೊರ ಬಿಡಲಾಗುತ್ತಿದೆ. ಬಳ್ಳಾರಿ ಜಿಲ್ಲೆಯಲ್ಲಿ 140 ಮನೆಗಳಿಗೆ ಹಾನಿಯಾಗಿದೆ.

### [illegible]

[illegible] ಹಾಗೂ ಬೀದರ್, ಹಾವೇರಿ, ಕೊಪ್ಪಳ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಹಳದಿ ಅಲರ್ಟ್ ಘೋಷಿಸಿದೆ.

## ಕಲಬುರಗಿ: 10 ಗಂಟೆ ಸುರಿದ ಮಳೆ

ಕಲಬುರಗಿ ಜಿಲ್ಲೆಯಲ್ಲಿ ಮಂಗಳವಾರ ಸಂಜೆಯಿಂದ ಬುಧವಾರ ಬೆಳಗ್ಗೆವರೆಗೆ ಸುಮಾರು 10 ಗಂಟೆಗಳ ಕಾಲ ಸತತ ಸುರಿದಿರುವ 'ಶತಮಾನದ ಮಳೆ'ಗೆ ದಿಕ್ಕೇ ತೋಚದಂತಾಗಿದೆ. ಪ್ರಸಕ್ತ ವರ್ಷ ಈ ತನಕ 848 ಮಿ.ಮೀ. ಮಳೆಯಾಗಿದೆ. ಸರಾಸರಿ 576 ಮಿ.ಮೀ.ಗಿಂತ ಶೇ.45ರಷ್ಟು ಹೆಚ್ಚುವರಿ ಮಳೆಯಾಗಿದೆ. ಎಲ್ಲ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಜಲಾಶಯ, ಹಳ್ಳ-ಕೊಳ್ಳಗಳು ಭರ್ತಿಯಾಗಿವೆ. ರಸ್ತೆ, ಹೊಲ ಗದ್ದೆಗಳಲ್ಲಿ ನೀರಿನ ಬುಗ್ಗೆಗಳು ಚಿಮ್ಮುತ್ತಿವೆ. ಕಲಬುರಗಿ-ಸೇಡಂ, ಚಿಂಚೋಳಿ-ಬೀದರ ಸೇರಿ ಇತರ ರಸ್ತೆಗಳ ಸಂಚಾರ ಸ್ಥಗಿತಗೊಂಡಿದೆ. ಮಳಖೇಡದ ಉತ್ತರಾದಿಮಠ ಸಂಪೂರ್ಣ ಜಲಾವೃತಗೊಂಡಿದೆ. ಮಠಕ್ಕೆ ಹೊಂದಿಕೊಂಡಿರುವ ಕಾಗಿಣಾ ನದಿ ಮೇಲಿನ ಸೇತುವೆ ಸಂಪೂರ್ಣ ಮುಳುಗಿದೆ.

## ಆಂಧ್ರ, ತೆಲಂಗಾಣದಲ್ಲೂ ವರುಣಾರ್ಭಟ

**ಹೈದರಾಬಾದ್:** ಅತ್ತ ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲೂ ಮಳೆಯ ಆರ್ಭಟ ಜೋರಾಗಿದೆ. ಮಳೆ ಸಂಬಂಧಿತ ಘಟನೆಗಳಲ್ಲಿ ಒಟ್ಟು 25 ಮಂದಿ ಮೃತಪಟ್ಟಿದ್ದಾರೆ. ಹೈದರಾಬಾದ್‌ನಲ್ಲಿ ಜಲಪ್ರಳಯವೇ ಉಂಟಾಗಿದೆ.

ಬಂಗಾಳಕೊಲ್ಲಿಯಲ್ಲಿನ ವಾಯುಭಾರ ಕುಸಿತದಿಂದಾಗಿ ಈ ಮಟ್ಟದ ಮಳೆಯಾಗಿದೆ. ಅಷ್ಟೇ ಅಲ್ಲ, ಆಂಧ್ರ, ತೆಲಂಗಾಣದ ಜತೆಗೆ ಮಹಾರಾಷ್ಟ್ರ ಮತ್ತು ಕರ್ನಾಟಕದಲ್ಲೂ ಇದರ ಪರಿಣಾಮ ಬೀರಿದೆ. ಪ್ರಧಾನಿ ನರೇಂದ್ರ ಮೋದಿ ಅವರು, ಆಂಧ್ರ ಸಿಎಂ ಜಗನ್ ಮೋಹನ್ ರೆಡ್ಡಿ ಮತ್ತು ತೆಲಂಗಾಣ ಸಿಎಂ ಕೆ.ಚಂದ್ರಶೇಖರರಾವ್ ಜತೆಗೆ ಚರ್ಚಿಸಿ, ಕೇಂದ್ರದಿಂದ ಎಲ್ಲ ನೆರವಿನ ಭರವಸೆ ನೀಡಿದ್ದಾರೆ. ಕೇಂದ್ರ ಮತ್ತು ರಾಜ್ಯಗಳ ವಿಪತ್ತು ನಿರ್ವಹಣಾ ಪಡೆಗಳು ರಕ್ಷಣಾ ಕಾರ್ಯದಲ್ಲಿ ತೊಡಗಿವೆ.

# ಜೀವನ ಕಸಿದ ನೆರೆ

15/10/20

**1ನೇ ಪುಟದಿಂದ.** ▶ ಈಗ ಇನ್ನುಳಿದ ಬೆಳೆ ಸಹ ಹಾನಿಯಾಗಿದ್ದು ರೈತರು ಕಂಗಾಲಾಗಿದ್ದಾರೆ. ಬೀದರ, ಯಾದಗಿರಿ, ರಾಯಚೂರು ಜಿಲ್ಲೆಯಲ್ಲೂ ನೂರಾರು ಮನೆಗಳು ಕುಸಿದಿವೆ. ಸಾವಿರಾರು ಹೆಕ್ಟೇರ್ ಪ್ರದೇಶದಲ್ಲಿನ ಭತ್ತ, ಮೆಣಸಿನಕಾಯಿ, ಹತ್ತಿ, ತೊಗರಿ, ಸೊಯಾಬಿನ್, ಈರುಳ್ಳಿ ಸೇರಿ ಇತರೆ ಬೆಳೆಗಳು ಜಲಾವೃತವಾಗಿವೆ.

**ಜೀವನದ ದೊಡ್ಡ ಮಳೆ:** ನಮ್ಮ ಜೀವಮಾನದಲ್ಲೇ ಇಂತಹ ಮಳೆ ನೋಡಿಲ್ಲ, ಎಲ್ಲಿ ನೋಡಿದರೂ ನೀರಿನ ಬುಗ್ಗೆ ಗಳು ಚಿಮ್ಮುತ್ತಿರುವುದು ಇದೇ ಮೊದಲು. 1992ರಲ್ಲಿ ಹೆಚ್ಚಿನ ಮಳೆಯಾಗಿ ದ್ದಾಗ ಸ್ವಲ್ಪ ಪ್ರಮಾಣದಲ್ಲಿ ನೀರಿನ ಬುಗ್ಗೆ ಚಿಮ್ಮಿರುವುದನ್ನು ನೋಡಿದ್ದೆ, ಆದರೆ ನಮ್ಮ ತಂದೆ, ಮುತ್ತಾತ ಸತತ ಮಳೆಯಿಂದ ರಸ್ತೆಯುದ್ದಕ್ಕೂ ನೀರಿನ ಬುಗ್ಗೆಗಳು ಏಳುತ್ತಿದ್ದವು ಎಂದು ಹೇಳಿದ್ದನ್ನು ಕೇಳಿದ್ದೆ. ಆದರೆ ನಾನು ನೋಡಿರಲಿಲ್ಲ ಎಂದು 90 ವರ್ಷದ ಹಿರಿಯರು ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.

**ಭೂಕಂಪದ ಭಯ:** 28 ವರ್ಷಗಳ ಹಿಂದೆ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದ್ದರಿಂದ ಆ ವರ್ಷ ಮಹಾರಾಷ್ಟ್ರದ ಕಲ್ಯಾಣ ಕರ್ನಾಟಕ ಭಾಗಕ್ಕೆ ಹತ್ತಿಕೊಂಡಂತಿರುವ ಲಾತೂರ, ಕಿಲಾರಿಯಲ್ಲಿ ಭಾರೀ ಪ್ರಮಾಣದ ಭೂಕಂಪವಾಗಿತ್ತು. ಈ ವರ್ಷವೂ ಇಡೀ ರಾಜ್ಯದಲ್ಲೇ ಕಲಬುರಗಿಯಲ್ಲಿ ಸರಾಸರಿಗಿಂತ ಹೆಚ್ಚಿನ ಮಳೆಯಾಗಿದೆ. ಹೀಗಾಗಿ ಮತ್ತೆ ಭೂಕಂಪವಾಗುತ್ತದೆ ಎಂದು ಭಯಭೀತರಾಗಿದ್ದಾರೆ.

# ಹಲವೆಡೆ ಧಾರಾಕಾರ ಮಳೆ

**ಬೆಂಗಳೂರು:** ಆಂಧ್ರಪ್ರದೇಶದ ಕರಾವಳಿ ಭಾಗದಲ್ಲಿ ವಾಯುಭಾರ ಕುಸಿತದಿಂದ ರಾಜ್ಯದ ಹಲವು ಜಿಲ್ಲೆಗಳಲ್ಲಿ ಬುಧವಾರ ಧಾರಾಕಾರ ಮಳೆಯಾಗಿದ್ದು ಕರಾವಳಿ ಹಾಗೂ ಉತ್ತರ ಒಳನಾಡಿನ ಹಲವು ಜಿಲ್ಲೆಗಳಲ್ಲಿ ಇಂದು (ಅ.15) ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಣೆ ಮಾಡಿದೆ.

ಕರಾವಳಿಯ ಉತ್ತರ ಕನ್ನಡ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ 20 ಸೆಂ.ಮೀ. (204 ಮಿ.ಮೀ.)ಗೂ ಹೆಚ್ಚು ಮಳೆಯಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಈ ಭಾಗದಲ್ಲಿ ಅ.15ಕ್ಕೆ ರೆಡ್ ಹಾಗೂ 16ಕ್ಕೆ ಆರೆಂಜ್ ಅಲರ್ಟ್ ನೀಡಿದೆ. ಬಾಗಲಕೋಟೆ ಬೆಳಗಾವಿ ಹಾಗೂ ವಿಜಯಪುರದಲ್ಲೂ 15ಕ್ಕೆ ರೆಡ್ ಹಾಗೂ 16ಕ್ಕೆ ಯಲ್ಲೋ ಅಲರ್ಟ್ ನೀಡಲಾಗಿದೆ.

ಧಾರವಾಡ, ಗದಗ, ಕಲಬುರಗಿ, ಚಿಕ್ಕಮಗಳೂರು, ಕೊಡಗು ಹಾಗೂ ಶಿವಮೊಗ್ಗದಲ್ಲಿ 115ರಿಂದ 204 ಮಿ.ಮೀ. ವರೆಗೆ ಮಳೆಯಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಆರೆಂಜ್ ಅಲರ್ಟ್ ಹಾಗೂ ಬೀದರ್, ಹಾವೇರಿ, ಕೊಪ್ಪಳ, ರಾಯಚೂರು, ಯಾದಗಿರಿ ಹಾಗೂ ಹಾಸನದಲ್ಲಿ ಯಲ್ಲೋ ಅಲರ್ಟ್ ನೀಡಲಾಗಿದೆ. 16ಕ್ಕೆ ಉತ್ತರ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಹವಾಮಾನ ಇಲಾಖೆ ಯಲ್ಲೋ ಅಲರ್ಟ್ ನೀಡಿದೆ.